ಬೆಂಗಳೂರು
ನಗರ ವಿಶ್ವವಿದ್ಯಾನಿಲಯ

ಆಗು ನೀ ಅನಿಕೇತನ
BE BOUNDLESS

BENGALURU
CITY UNIVERSITY

Office of the Registrar(Evaluation), Central College Campus, Dr. B.R AmbedkarVeedhi, Bengaluru – 560 001.E-mail: registrarevlubcu@gmail.com, Ph.No.080-22295559

ಸಂಖ್ಯೆ:ಬೆಂ.ನ.ವಿ/ಪ.ವಿ/ ಪ.ಪ್ರಪ 2023–24 ದಿನಾಂಕ: 07.08.2023

## ಸುತ್ತೋಲೆ

10.07.2023 ರಂದು ಬೆಂಗಳೂರು ನಗರ ವಿಶ್ವವಿದ್ಯಾನಿಲಯದ 2ನೇ ಘಟಿಕೋತ್ಸವವು ನಡೆದಿದ್ದು, ಆ ಘಟಿಕೋತ್ಸವದಲ್ಲಿ ಅರ್ಹತೆ ಪಡೆದು, ಶುಲ್ಕ ಪಾವತಿ ಮಾಡಿರುವ ವಿದ್ಯಾರ್ಥಿಗಳ ಪದವಿ ಪ್ರಮಾಣ ಪತ್ರಗಳು ಮುದ್ರಣವಾಗುತ್ತಿವೆ. ಮುದ್ರಣಗೊಂಡ ನಂತರ ಕಾಲೇಜುಗಳಿಗೆ ವಿತರಣೆ ಮಾಡಲು ಕ್ರಮವಹಿಸಲಾಗುತ್ತಿದೆ. ಆದರೆ, ಕೆಲವು ಕಾಲೇಜುಗಳು ವಿಶ್ವವಿದ್ಯಾಲಯಕ್ಕೆ ತುಂಬಬೇಕಾದ ಹಣವನ್ನು ಬಾಕಿ ಉಳಿಸಿಕೊಂಡಿರುವುದಾಗಿ ತಿಳಿದು ಬಂದಿದ್ದು, ಪದವಿ ಪ್ರಮಾಣ ಪತ್ರ ಪಡೆಯುವ ಮುನ್ನ ಕಾಲೇಜುಗಳ ಪ್ರಾಂಶುಪಾಲರು ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಶೈಕ್ಷಣಿಕ ವಿಭಾಗದ ಕುಲಸಚಿವರಿಂದ ಬೇಬಾಕಿ ಪ್ರಮಾಣ ಪತ್ರವನ್ನು (No Due Certificate) ಪಡೆದು ಪರೀಕ್ಷಾ ವಿಭಾಗದಲ್ಲಿ ಸಲ್ಲಿಸಿ, ಆಯಾ ಕಾಲೇಜಿನ ಪದವಿ ಪ್ರಮಾಣ ಪತ್ರಗಳನ್ನು ಪಡೆಯಬೇಕೆಂದು ತಿಳಿಸಲಾಗಿದೆ. ಪದವಿ ಪ್ರಮಾಣ ಪತ್ರಗಳನ್ನು ಬೇಬಾಕಿ ಪತ್ರವಿಲ್ಲದೇ ನೀಡುವುದಿಲ್ಲವೆಂದು ಎಲ್ಲರ ಗಮನಕ್ಕೆ ತರಲಾಗಿದೆ.

ಪದವಿ ಪ್ರಮಾಣ ಪತ್ರಗಳನ್ನು ಪಡೆಯುವಾಗ ಪ್ರಾಂಶುಪಾಲರು ಅಥವಾ ಅವರ ಸಿಬ್ಬಂದಿ ಪದವಿ ಪ್ರಮಾಣ ಪತ್ರಗಳು ಸರಿಯಾಗಿವೆಯೇ ಮತ್ತು ಎಲ್ಲ ವಿದ್ಯಾರ್ಥಿಗಳ ಪದವಿ ಪ್ರಮಾಣ ಪತ್ರಗಳು ಪಟ್ಟಿಯಲ್ಲಿರುವಂತೆ ಇರುವ ಬಗ್ಗೆ ಪರಿಶೀಲಿಸಿಕೊಂಡು ತೆಗೆದುಕೊಂಡು ಹೋಗಬೇಕೆಂದು ಕೋರಿದೆ. ನಂತರ ಬಂದ ದೂರುಗಳನ್ನು ಪರಿಗಣಿಸಲಾಗುವುದಿಲ್ಲ.

Loka. L.

ಕುಲಸಚಿವರು(ಮೌಲ್ಯಮಾಪನ)

ಕುಲಸಚಿವರು (ಮೌಲ್ಯಮಾಪನ)
ಬೆಂಗಳೂರು ನಗರ ವಿಶ್ವವಿದ್ಯಾನಿಲಯ
ಸೆಂಟ್ರಲ್ ಕಾಲೇಜು ಕ್ಯಾಂಪಸ್
ಬೆಂಗಳೂರು – 560 001

ಗೆ,

1. ಬೆಂಗಳೂರು ನಗರ ವಿಶ್ವವಿದ್ಯಾಲಯಕ್ಕೆ ಸಂಯೋಜನೆಗೊಂಡಿರುವ ಎಲ್ಲಾ UG/PG/B.Ed/Autonomous ಕಾಲೇಜುಗಳ ಪ್ರಾಂಶುಪಾಲರುಗಳಿಗೆ
2. ಕುಲಪತಿಗಳು/ಕುಲಸಚಿವರು ಆಡಳಿತ/ವಿತ್ತಾಧಿಕಾರಿಯವರ ಆಪ್ತ ಕಾರ್ಯದರ್ಶಿಗಳು ಬೆಂಗಳೂರು ನಗರ ವಿಶ್ವವಿದ್ಯಾನಿಲಯ, ಬೆಂಗಳೂರು.